5. ಶಾಸನ ರಚನೆ

ಅ) ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2009

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು) :-ಮಾನ್ಯ ಅಧ್ಯಕ್ಷರೆ, 2009 ರ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ,

"2009ರ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ" ವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು) :- ಮಾನ್ಯ ಅಧ್ಯಕ್ಷರೆ, 2009ರ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :- ವಿಧೇಯಕವನ್ನು ಮಂಡಿಸಲಾಗಿದೆ.

ಆ) ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಿದ್ದುಪಡಿ) ವಿಧೇಯಕ 2009

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು) :- ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ,

"2009ರ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಿದ್ದುಪಡಿ) ವಿಧೇಯಕ" ವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು) :-ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :- ವಿಧೇಯಕವನ್ನು ಮಂಡಿಸಲಾಗಿದೆ.

ಇ) ಕರ್ನಾಟಕ ಬಾಡಿಗೆ (ತಿದ್ದುಪಡಿ) ವಿಧೇಯಕ 2008

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಕರುಣಾಕರ ರೆಡ್ಡಿ (ಕಂದಾಯ ಸಚಿವರು) :-ಮಾನ್ಯ ಅಧ್ಯಕ್ಷರೆ, 2008ರ ಕರ್ನಾಟಕ ಬಾಡಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ,

"2008ರ ಕರ್ನಾಟಕ ಬಾಡಿಗೆ (ತಿದ್ದುಪಡಿ) ವಿಧೇಯಕ" ವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಕರುಣಾಕರ ರೆಡ್ಡಿ (ಕಂದಾಯ ಸಚಿವರು) :- ಮಾನ್ಯ ಅಧ್ಯಕ್ಷರೆ, 2008 ರ ಕರ್ನಾಟಕ ಬಾಡಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :- ವಿಧೇಯಕವನ್ನು ಮಂಡಿಸಲಾಗಿದೆ.

ಕರ್ನಾಟಕ ದೇವದಾಸಿಯರ (ಸಮರ್ಪಣಾ ನಿಷೇಧ) (ತಿದ್ದುಪಡಿ) ವಿಧೇಯಕ 2009

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಪಿ.ಎಂ. ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :- ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ದೇವದಾಸಿಯರ (ಸಮರ್ಪಣಾ ನಿಷೇಧ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ,

"2009ರ ಕರ್ನಾಟಕ ದೇವದಾಸಿಯರ (ಸಮರ್ಪಣಾ ನಿಷೇಧ) (ತಿದ್ದುಪಡಿ) ವಿಧೇಯಕ" ವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಪಿ.ಎಂ. ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :- ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ದೇವದಾಸಿಯರ (ಸಮರ್ಪಣಾ ನಿಷೇಧ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :- ವಿಧೇಯಕವನ್ನು ಮಂಡಿಸಲಾಗಿದೆ.

6. ಗಮನ ಸೆಳೆಯುವ ಸೂಚನೆಗಳು

ಅ) ವಿಷಯ :- ಮುಳಬಾಗಿಲು ತಾಲ್ಲೂಕನ್ನು 2008-09ರ ಸಾಲಿನ ಬರಪೀಡಿತ ಪ್ರದೇಶವೆಂದು ಘೋಷಣೆ ಮಾಡಿದ್ದು, ಪರಿಹಾರದ ಸಂಬಂಧದಲ್ಲಿ ಕೆಲವು ಯೋಜನೆಗಳನ್ನು ಸರ್ಕಾರ ಘೋಷಿಸಿದ್ದು, ಈವರೆವಿಗೂ ಯೋಜನೆಗಳು ಅನುಷ್ಠಾನ ಗೊಳ್ಳದಿರುವ ಬಗ್ಗೆ.

ಶ್ರೀ ಅಮರೇಶ್ (ಮುಳಬಾಗಿಲು) :- ಮಾನ್ಯ ಅಧ್ಯಕ್ಷರೇ, ಮುಳಬಾಗಿಲು ತಾಲ್ಲೂಕನ್ನು 2008-09ರ ಸಾಲಿನ ಬರಪೀಡಿತ ಪ್ರದೇಶವೆಂದು ಘೋಷಣೆ ಮಾಡಿದ್ದು, ಪರಿಹಾರದ ಸಂಬಂಧದಲ್ಲಿ ಕೆಲವು ಯೋಜನೆಗಳನ್ನು ಸರ್ಕಾರ ಘೋಷಿಸಿದ್ದು, ಈವರೆವಿಗೂ ಯೋಜನೆಗಳು ಅನುಷ್ಠಾನಗೊಳ್ಳದಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನವನ್ನು ಸೆಳೆಯುತ್ತೇನೆ.

ಶ್ರೀ ಜಿ. ಕರುಣಾಕರ ರೆಡ್ಡಿ (ಕಂದಾಯ ಸಚಿವರು) :- ಮಾನ್ಯ ಅಧ್ಯಕ್ಷರೇ, ತಮ್ಮ ಅನುಮತಿಯನ್ನು ಪಡೆದು ಈ ಹೇಳಿಕೆಯನ್ನು ನೀಡ ಬಯಸುತ್ತೇನೆ.

2008-09ನೇ ಸಾಲಿನಲ್ಲಿ ಮುಂಗಾರು ಮಾಮೂಲಿನಂತೆ ಪ್ರಾರಂಭವಾದರೂ ಕರಾವಳಿ ಪ್ರದೇಶವನ್ನು ಬಿಟ್ಟು ರಾಜ್ಯದ ಇತರ ಭಾಗಗಳಲ್ಲಿ ಮುಂಗಾರು ದುರ್ಬಲವಾಗಿತ್ತು. ಜೂನ್ - 1 ರಿಂದ ಅಗಸ್ಟ್ - 5 ರವರೆಗೆ ರಾಜ್ಯದಲ್ಲಿ ಮಳೆ ಬೆಳೆ ಪರಿಸ್ಥಿತಿ ಪರಿಶೀಲಿಸಿದಾಗ 501 ಮಿ.ಮೀ ವಾಡಿಕೆ ಮಳೆಯಾಗಬೇಕಿದ್ದು, ವಾಸ್ತವವಾಗಿ 385 ಮಿ.ಮೀ ಮಳೆಯಾಗಿ ಶೇಕಡಾ (-) 23ರಷ್ಟು ಮಳೆ ಕೊರತೆಯಾಗಿರುತ್ತದೆ. ಜೂನ್